# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1339(1611)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ|| ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಹೆಬ್ಬಾಳ ನಗರದಲ್ಲಿನ ಮಾದಕ ದ್ರವ್ಯಗಳ ಬಗ್ಗೆ

(ಅ) ಬೆಂಗಳೂರು ನಗರದ ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ಅವ್ಯಾಹತವಾಗಿ ಮಾದಕದ್ರವ್ಯಗಳನ್ನು ಎಗ್ಗಿಲ್ಲದೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ 5 ವರ್ಷಗಳಲ್ಲಿ ಇದೂವರೆವಿಗೆ ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಸಾಗಾಟ, ಸರಬರಾಜು, ಸೇವನೆ ಇತ್ಯಾದಿ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದರ ವಿರುದ್ಧ ದಾಖಲಾಗಿರುವ ಪ್ರಕರಣಗಳೆಷ್ಟು; (ವಿವರಗಳನ್ನು ಪ್ರಕರಣವಾರು ನೀಡುವುದು)

(ಇ) ಈ ಪ್ರಕರಣಗಳಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಭಾಗಿಯಾಗಿದ್ದರೆ ವಿವರಗಳನ್ನು ಸಹ ನೀಡುವುದು;

(ಈ) ಮಾದಕ ವಸ್ತುಗಳ ಮುಕ್ತ ಹೆಬ್ಬಾಳ ಮಾಡುವ ನಿಟ್ಟಿನಲ್ಲಿ ಗೃಹ ಇಲಾಖೆ ಕೈಗೊಂಡ ಕ್ರಮಗಳೇನು?